12 5

ಕರ್ನಾಟಕ ಸರ್ಕಾರ

# ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, ಮಲ್ಲೇಶ್ವರಂ, ಬೆಂಗಳೂರು

***************************************************************************************************

**ಸಂಖ್ಯೆ : ಸಿಎಸ್1/ಎಸ್.ಎಸ್.ಎಲ್.ಸಿ/2024/ಮೌ.ಮಾ.ಆ/01/2023-24** **ದಿನಾಂಕ: 05-04-2024**

ಪರೀಕ್ಷಾ ತುರ್ತು

**:: ಸುತ್ತೋಲೆ ::**

**ವಿಷಯ:** 2024 ಎಸ್.ಎಸ್.ಎಲ್.ಸಿ ಪರೀಕ್ಷೆ – 1ರ ಮೌಲ್ಯಮಾಪನ ಕಾರ್ಯಕ್ಕೆ ನಿಯೋಜನೆಗೊಂಡಿರುವ ಉಪಮುಖ್ಯ ಮೌಲ್ಯಮಾಪಕರು ಹಾಗೂ ಸಹಾಯಕ ಮೌಲ್ಯಮಾಪಕರ ಆದೇಶಗಳನ್ನು ಶಾಲಾ ಲಾಗಿನ್‌ನಲ್ಲಿ ಡೌನ್‌ಲೋಡ್ ಮಾಡಿಕೊಳ್ಳುವ ಬಗ್ಗೆ.

*******

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ ವತಿಯಿಂದ 2024 ಎಸ್.ಎಸ್.ಎಲ್.ಸಿ ಪರೀಕ್ಷೆ – 1ರ ಮೌಲ್ಯಮಾಪನ ಕಾರ್ಯವು ದಿನಾಂಕ: 15-04-2024 ರಿಂದ ಪ್ರಾರಂಭವಾಗುತ್ತಿದ್ದು, ದಿನಾಂಕ: 13-04-2024 ರಂದು ಉಪಮುಖ್ಯ ಮೌಲ್ಯಮಾಪಕರು ಹಾಗೂ ದಿನಾಂಕ: 15-04-2024 ರಂದು ಸಹಾಯಕ ಮೌಲ್ಯಮಾಪಕರು ಹಾಜರಾಗಬೇಕಾಗಿದೆ. ಈ ಸಂಬಂಧ ರಾಜ್ಯದ ಎಲ್ಲಾ 35 ಜಿಲ್ಲೆಗಳ ಸರ್ಕಾರಿ ಮತ್ತು ಮಾನ್ಯತೆ ಪಡೆದಿರುವ ಖಾಸಗಿ ಅನುದಾನಿತ ಹಾಗೂ ಅನುದಾನರಹಿತ ಶಾಲೆಗಳ ಮುಖ್ಯ ಶಿಕ್ಷಕರಿಗೆ ತಮ್ಮ ಶಾಲೆಯಿಂದ ಮೌಲ್ಯಮಾಪನ ಕಾರ್ಯಕ್ಕಾಗಿ ನಿಯೋಜನೆಗೊಂಡಿರುವ ಉಪಮುಖ್ಯ ಮೌಲ್ಯಮಾಪಕರ ಮತ್ತು ಸಹಾಯಕ ಮೌಲ್ಯಮಾಪಕರ ನೇಮಕಾತಿ ಆದೇಶ ಪತ್ರಗಳನ್ನು ಮಂಡಲಿಯ ಜಾಲತಾಣದ ಶಾಲಾ ಲಾಗಿನ್‌ನಲ್ಲಿ ದಿನಾಂಕ: 05-04-2024 ರಿಂದ ಆನ್‌ಲೈನ್ ಮೂಲಕ ಡೌನ್‌ಲೋಡ್ ಮಾಡಿಕೊಳ್ಳುವ ವ್ಯವಸ್ಥೆ ಕಲ್ಪಿಸಲಾಗಿದೆ.

1) ಮಂಡಲಿಯ ಜಾಲತಾಣ https://kseab.karnataka.gov.in ರಲ್ಲಿರುವ ಶಾಲಾ ಲಾಗಿನ್‌ನಲ್ಲಿ Evaluation Orders of 2024 SSLC Exam-1 ಮೆನುವಿನಲ್ಲಿ ಮೌಲ್ಯಮಾಪಕರ ನೇಮಕಾತಿ ಆದೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ.
2) ಆಯಾ ಶಾಲೆಯ ಮುಖ್ಯ ಶಿಕ್ಷಕರು ತಮ್ಮ ಶಾಲೆಯಿಂದ ಮೌಲ್ಯಮಾಪನ ಕಾರ್ಯಕ್ಕಾಗಿ ನಿಯೋಜಿಸಿರುವ ಅರ್ಹ ಶಿಕ್ಷಕರ ನೇಮಕಾತಿ ಆದೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಂಡು ಪರಿಶೀಲಿಸಿ, ಸಂಬಂಧಪಟ್ಟ ಶಿಕ್ಷಕರಿಗೆ ವಿತರಣೆ ಮಾಡಿ ಕರ್ತವ್ಯದಿಂದ ಬಿಡುಗಡೆಗೊಳಿಸಿ, ಮೌಲ್ಯಮಾಪನ ಕಾರ್ಯಕ್ಕೆ ಹಾಜರಾಗುವಂತೆ ನಿರ್ದೇಶನ ನೀಡುವುದು.

ಮುಂದುವರೆದು, ಪ್ರತಿ ಜಿಲ್ಲೆಯ EO LOGIN ನಲ್ಲಿಯೂ ಸಹ ಆಯಾ ಜಿಲ್ಲೆಯ ವಿವಿಧ ವಿಷಯಗಳ ಮೌಲ್ಯಮಾಪನ ಕೇಂದ್ರಗಳಿಗೆ ನೇಮಕ ಮಾಡಿರುವ ಮೌಲ್ಯಮಾಪಕರ ಚೆಕ್‌ಲಿಸ್ಟ್ ನೀಡಲಾಗುವುದು. ಆಯಾ ಜಿಲ್ಲೆಯ ಉಪನಿರ್ದೇಶಕರು ಮತ್ತು ಎಸ್.ಎಸ್.ಎಲ್.ಸಿ ನೋಡಲ್ ಅಧಿಕಾರಿಗಳು ಮೌಲ್ಯಮಾಪನ ಕಾರ್ಯಕ್ಕೆ ನಿಯೋಜನೆಗೊಂಡಿರುವ ಎಲ್ಲಾ ಶಿಕ್ಷಕರು ಕರ್ತವ್ಯಕ್ಕೆ ಹಾಜರಾಗಿರುವ ಬಗ್ಗೆ ಖಚಿತಪಡಿಸಿಕೊಳ್ಳುವುದು ಮತ್ತು ಮೌಲ್ಯಮಾಪನ ಕಾರ್ಯದ ಉಸ್ತುವಾರಿ ಹಾಗೂ ಮೇಲ್ವಿಚಾರಣೆ ನಿರ್ವಹಿಸುವುದು.

(ಗೋಪಾಲಕೃಷ್ಣ ಹೆಚ್.ಎನ್.)
ನಿರ್ದೇಶಕರು (ಪರೀಕ್ಷೆಗಳು)

ಅಗತ್ಯ ಕ್ರಮಕ್ಕಾಗಿ :

1) ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ರವರಿಗೆ
2) ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಮಾನ್ಯತೆ ಪಡೆದಿರುವ ಖಾಸಗಿ ಅನುದಾನರಹಿತ ಪ್ರೌಢಶಾಲೆಗಳ ಮುಖ್ಯಸ್ಥರಿಗೆ – ಶಾಲಾ ಲಾಗಿನ್ ಮೂಲಕ